ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿ/ಸಿಬ್ಬಂದಿ-3/ಹೊಕಾಅ/4/2012-13

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ,
ಮಲ್ಲೇಶ್ವರ, ಬೆಂಗಳೂರು-12,
ದಿನಾಂಕ 30-10-2013

## ಜ್ಞಾ ಪ ನ

ವಿಷಯ:- 2014-15ನೇ ಶೈಕ್ಷಣಿಕ ಸಾಲಿನಲ್ಲಿ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸುವ ಸಂಬಂಧ ರಚಿಸಲಾಗಿರುವ ಜಿಲ್ಲಾ ತಪಾಸಣಾ ಸಮಿತಿ ಸದಸ್ಯರಿಗೆ ತಿಳುವಳಿಕೆ ನೀಡುವ ಕಾರ್ಯಾಗಾರ ಏರ್ಪಡಿಸಿರುವ ಕುರಿತು.

ಉಲ್ಲೇಖ:-
1. ಪದವಿ ಪೂರ್ವ ಶಿಕ್ಷಣ ನಿಯಮಗಳು 2006.
2. ಕರ್ನಾಟಕ ನಾಗರಿಕ ಸೇವೆಗಳ ಖಾತರಿ ವಿಧೇಯಕ 2011ರ ತಿದ್ದುಪಡಿ ಅಧಿಸೂಚನೆ ಸಂಖ್ಯೆ ಸಿಆಸುಇ 13 ಇಕಾಅ 2012 ದಿನಾಂಕ 21-04-2012.
3. ಈ ಕಛೇರಿಯ ಸಮ ಸಂಖ್ಯೆಯ ಜ್ಞಾಪನ ದಿನಾಂಕ 03-10-13.

---

1) ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 4ರ ಅನ್ವಯ 2014-15ನೇ ಶೈಕ್ಷಣಿಕ ಸಾಲಿನಲ್ಲಿ ರಾಜ್ಯದಲ್ಲಿ ಖಾಸಗಿ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಇಚ್ಛಿಸುವ ಖಾಸಗಿ ಅರ್ಹ ಶಿಕ್ಷಣ ಸಂಸ್ಥೆಗಳಿಗೆ / ಟ್ರಸ್ಟ್‌ಗಳಿಗೆ ಅವಕಾಶ ಕಲ್ಪಿಸಬೇಕಾಗಿದೆ. ಕರ್ನಾಟಕ ನಾಗರಿಕ ಸೇವೆಗಳ ಖಾತರಿ ವಿಧೇಯಕ 2011ರ ತಿದ್ದುಪಡಿ ಅಧಿಸೂಚನೆ ಸಂಖ್ಯೆ ಸಿಆಸುಇ 13 ಇಕಾಅ 2012 ದಿನಾಂಕ 21-04-2012 ರಲ್ಲಿ ನಿಗದಿಪಡಿಸಿರುವ ಕಾಲಮಿತಿಯೊಳಗೆ ಸದರಿ ಕಾರ್ಯವನ್ನು ನಿರ್ವಹಿಸಬೇಕಾಗುತ್ತದೆ.

2) 2014-15ನೇ ಶೈಕ್ಷಣಿಕ ಸಾಲಿನಲ್ಲಿ ಆಯಾ ಜಿಲ್ಲೆಯಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಖಾಸಗಿ ಪದವಿ ಪೂರ್ವ ಕಾಲೇಜುಗಳು ನಿಯಮಗಳನ್ವಯ ಅರ್ಹತೆ ಹೊಂದಿರುವ ಕುರಿತು ಪರಿಶೀಲಿಸಿ ವರದಿ ನೀಡಲು, ಪದವಿ ಪೂರ್ವ ಶಿಕ್ಷಣ ನಿಯಮಗಳು 2006ರ ನಿಯಮ 2(7) ರಂತೆ ಕೂಡಲೇ ತಪಾಸಣಾ ಸಮಿತಿ (Inspection Committee) ರಚಿಸಿ, ಸದರಿ ಪಟ್ಟಿಯನ್ನು ದಿನಾಂಕ **26-10-2013** ರೊಳಗೆ ಈ ಕಛೇರಿಗೆ ಕಳುಹಿಸಿ, ನಿರ್ದೇಶಕರಿಂದ ಅನುಮೋದನೆ ಪಡೆದುಕೊಳ್ಳಲು ಉಲ್ಲೇಖ-3ರ ಜ್ಞಾಪನದಲ್ಲಿ ಸೂಚಿಸಲಾಗಿತ್ತು. ಇನ್ನೂ (Inspection Committee) ರಚಿಸಿ, ಪಟ್ಟಿಯನ್ನು ಅನುಮೋದಿಸಿಕೊಳ್ಳದೇ ಇದ್ದಲ್ಲಿ, ಕೂಡಲೇ ಈ ಬಗ್ಗೆ ಕ್ರಮ ವಹಿಸುವುದು.

3) ಖಾಸಗಿ ಶಿಕ್ಷಣ ಸಂಸ್ಥೆಗಳು / ಟ್ರಸ್ಟ್‌ಗಳು ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭಿಸಲು ಉದ್ದೇಶಿಸಿರುವ ಸ್ಥಳ, ನಿವೇಶನ, ಕಟ್ಟಡ, ಮೂಲಭೂತ ಸೌಲಭ್ಯಗಳು, ಸಂಸ್ಥೆ / ಟ್ರಸ್ಟ್‌ನ ದಾಖಲೆ ಪತ್ರಗಳನ್ನು ಪರಿಶೀಲಿಸುವ ಕಾರ್ಯದಲ್ಲಿ ಸಹಕಾರಿಯಾಗುವಂತೆ ಜಿಲ್ಲಾ ಮಟ್ಟದ ತಪಾಸಣಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರಿಗೆ ತಪಾಸಣಾ ಮಾರ್ಗಸೂಚಿಗಳ ಬಗ್ಗೆ ತಿಳುವಳಿಕೆ ನೀಡುವ ಕಾರ್ಯಾಗಾರವನ್ನು ಈ ಕಛೇರಿಯ ಸಭಾ ಕೊಠಡಿಯಲ್ಲಿ ದಿನಾಂಕ **06-11-2013** ರಂದು ಬೆಳಗ್ಗೆ **10-30** ಗಂಟೆಗೆ ನಿಗದಿಗೊಳಿಸಲಾಗಿದೆ. ಈ ಸಭೆಗೆ ನಿಯೋಜಿತ ಜಿಲ್ಲಾ ತಪಾಸಣಾ ಸಮಿತಿಯ ಅಧ್ಯಕ್ಷರು / ಸದಸ್ಯರು ತಪ್ಪದೇ ಹಾಜರಾಗುವಂತೆ ಸೂಚಿಸಲು ಜಿಲ್ಲಾ ಉಪ ನಿರ್ದೇಶಕರಿಗೆ ತಿಳಿಸಲಾಗಿತ್ತು, ಜೊತೆಗೆ ಜಿಲ್ಲಾ ಉಪ ನಿರ್ದೇಶಕರೂ ಸಹ ಈ ಸಭೆಗೆ ತಪ್ಪದೇ ಹಾಜರಾಗುವಂತೆ ಸೂಚಿಸಲಾಗಿತ್ತು, ಅದರಂತೆ ದಿನಾಂಕ **06-11-2013** ರಂದು ಬೆಳಗ್ಗೆ **10-30** ಗಂಟೆಗೆ ಜಿಲ್ಲಾ ಉಪ ನಿರ್ದೇಶಕರು ಮತ್ತು ನಿಯೋಜಿತ ಜಿಲ್ಲಾ ತಪಾಸಣಾ ಸಮಿತಿಯ ಅಧ್ಯಕ್ಷರು / ಸದಸ್ಯರು ತಪ್ಪದೇ ಕಾರ್ಯಾಗಾರಕ್ಕೆ ಹಾಜರಾಗುವಂತೆ ಮತ್ತೊಮ್ಮೆ ಸೂಚಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಗೆ,
ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ.

ಪ್ರತಿಗಳು:-

1. ಜಿಲ್ಲಾ ತಪಾಸಣಾ ಸಮಿತಿಯ ಅಧ್ಯಕ್ಷರು ಮತ್ತು ಸದಸ್ಯರಿಗೆ – ಜಿಲ್ಲಾ ಉಪ ನಿರ್ದೇಶಕರ ಮೂಲಕ.
2. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳು ಮತ್ತು ಸಂಬಂಧಿಸಿದ ಸಿಬ್ಬಂದಿಗೆ.
3. ಹೆಚ್ಚುವರಿ ಪ್ರತಿ.